# ಶ್ರೀ ವಿಜಯದಾಸರ ಕೃತಿ

ನಿನ್ನ ಒಲುಮೆಯಿಂದ ನಿಖಿಳ ಜನರು ಬಂದು ಮನ್ನಿಸುವರೋ ಮಹರಾಯ ॥ ಪ॥

ಎನ್ನ ಪುಣ್ಯಗಳಿಂದ ಈ ಪರಿಯುಂಟೇನೊ ನಿನ್ನದೆ ಸಕಲ ಸಂಪತ್ತು ॥ ಅ.ಪ॥

ಒಬ್ಬ ಹೆಂಗುಸಿಗೆ ಹೊಟ್ಟೆಗೆ ಹಾಕುವುದಕಿನ್ನು ತಬ್ಬಿಬ್ಬುಗೊಂಡೆನೊ ಹಿಂದೆ
ನಿಬ್ಬರದಿಂದಲಿ ಸರ್ವರ ಕೂಡುಂಬೊ ಹಬ್ಬವನುಣಿಸುವಿ ಹರಿಯೆ ॥ 1॥

ಸಂಚಿತನಕವಿದ್ದು ಸಣ್ಣಸೌಟಿನ ತುಂಬ ಗಂಜಿ ಕಾಣದೆ ಬಳಲಿದೆನೊ।
ವ್ಯಂಜನ ಮೊದಲಾದ ನಾನಾ ರಸಂಗಳ ಭುಂಜಿಸುವುದು ಮತ್ತೇನೊ ॥ 2॥

ಜೀರ್ಣ ಮಲಿನ ವಸ್ತ್ರ ಕಾಣದ ನರನಿಗೆ ಊರ್ಣ ವಿಚಿತ್ರ ಸುಮನಸ
ವರ್ಣ ವರ್ಣದಿಂದ ಬಾಹೋದದೇನೊ ಸಂ ಪೂರ್ಣ ಗುಣಾರ್ಣವ ದೇವ ॥ 3॥

ನಿಚೋಚ್ಛ ತಿಳಿಯದೆ ಸರ್ವರ ಚರಣಕ್ಕೆ ಚಾಚಿದೆ ನೊಸಲು ಹಸ್ತಗಳ
ಯೋಚಿಸಿ ನೋಡಲು ಸೋಜಿಗವಾಗಿದೆ ವಾಚಕ್ಕೆ ನಿಲುಕದು ಹರಿಯೆ ॥ 4॥

ಮಧ್ಯಾಹ್ನ ಕಾಲಕ್ಕೆ ಅತಿಥಿಗಳಿಗೆ ಅನ್ನ ಮೆದ್ದೆನೆಂದರೆ ಈಯಿಗಾಣೆ
ಈ ಧರೆಯೊಳಗೆ ಸತ್ಪಾತ್ರರ ಕೂಡುಂಬೊ ಪದ್ಧತಿ ನೋಡೊ ಪುಣ್ಯಾತ್ಮ ॥ 5॥

ಮನೆಮನೆ ತಿರಿದರು ಕಾಸು ಪುಟದೆ ಸುಮ್ಮನೆ ಚಾಲ್ವರಿದು ಬಳಲಿದೆನೊ।
ಹಣ ಹೊನ್ನು ದ್ರವ್ಯಂಗಳಿದ್ದಲ್ಲಿಗೆ ತನಗೆ ತಾನೆ ಪ್ರಾಪ್ತಿ ನೋಡೊ ಜೀಯಾ ॥ 6॥

ವೈದಿಕ ಪದವಿಯನೀವಗೆ ಲೌಕಿಕ ಐದಿಸುವುದೆ ಬಹು ಖ್ಯಾತಿ
ಮೈದುನಗೊಲಿದ ಶ್ರೀ ವಿಜಯವಿಠಲ ನಿನ್ನ ಪಾದಾಕ್ಷಿಯನುಭವವೊ ॥ 7॥

# ಶ್ರೀ ವಿಜಯದಾಸರ ಕೃತಿ

ಬಾ ಬಾ ಭಕುತರ ಹೃದಯ ಮಂದಿರ ಬಾ ಬಾ ಜಗದೋದ್ಧಾರ ॥ ಪ॥

ಬಾ ಬಾ ವೇಂಕಟಾಚಲ ವಿಹಾರ ಬಾ ಬಾನೇಕಾವತಾರ ಧೀರ-ಶೂರ ॥ ಅ.ಪ॥

ದಕ್ಷ ಕಮಲಾಕ್ಷ ರಾಕ್ಷಸ ಕುಲ ಶಿಕ್ಷ ಲಕ್ಷ್ಮಣನಗ್ರಜ ಲಕ್ಷ್ಮೀವಕ್ಷ
ಪಕ್ಷಿವಾಹನ ಪೂರ್ಣಲಕ್ಷಣ ಸರ್ವೇಶ ಮೋಕ್ಷದಾಯಕ ಪಾಂಡವ ಪಕ್ಷ
ಅಕ್ಷಯವಂತ ಸೂಕ್ಷ್ಮಾಂಬರ ಧರಾಧ್ಯಕ್ಷ ಪ್ರತ್ಯಕ್ಷದ ದೈವ
ಅಕ್ಷತನಾರೇರ ತಕ್ಷಣದಲಿ ತಂದ ಅಕ್ಷರ ಪುರುಷ ಗೋವಿಂದ ॥ 1॥

ಜಾಂಬೂನಾದಾಂಬರ ಸಾಂಬಜನಕ-ನೀಲಾಂಬುದ ವರ್ಣಸುಪೂರ್ಣ।
ಸಾಂಬವಿನುತ ಸುಗುಣಾಂಬುಧಿ ನಾನಾ ವಿಡಂಬನ ತೋರಿದ ಮಹಿಮ।

ಕಾಂಬುವೆ ನಿನ್ನ ಚರಣಾಂಬುಜ ಮನದೊಳು ಜಾಂಬುವಂತನ ಪರಿಪಾಲಾ ವಿ-।
ಶ್ವಂಭರಂಬರಗಙ್ಗೆಣಿಯ ಪಡೆದ ವೃತ್ತುಂಬರೇಶಾಂಬುಧಿ ಶಾಯಿ ॥ 2॥

ತಾಳ ಜಾಗಟೆ ಮದ್ದಳೆ ದುಂದುಭಿ ಭೇರಿ ಕಾಳೆ ಹೆಗ್ಗಾಳೆ ತಮ್ಮಟ ನಿ-।
ಸ್ಸಾಳೆ ಪಟಹ ತಂಬೂರಿ ಪಣವ ಕಂಸಾಳೆ ಕಂಬುಡಿಕ್ಕಿ ವಾದ್ಯ
ಸೂಳೈಸುತಲಿರೆ ಭಾಗವತರು ಸಂಮೇಳಟ ಕುಣಿದೊಲಿದಾಡೆ।
ಸಾಲುಪಂಜಿನ ಗುಂಜಿ ಛತ್ರ ಚಾಮರ ಧ್ವಜ ಧಾಲುಗಳು ಒಪ್ಪಿರಲು ॥ 3॥

ಹಂಸವಾಹನ ಕ್ರತುಧ್ವಂಸಿ ಸುಮನಸೋತ್ತಂಸ ಕೃಶಾನು ಪಾಪಿಗಳ।
ಹಿಂಸೆಯ ಗೋಳಿಸುವ ಪಾಂಸರಕ್ಕಸಪಾಳಿ ಕೌಂಶಿಕಾಪತಿಯು ಧನಪ।
ಅಂಶಮಾಲಿ ಸೋಮಕಂಶಿಕಮುನಿ ಪರಮ ಹಂಸರು ಅಲ್ಲಲ್ಲಿ ನಿಂದು।
ಸಂಶಯ ಮಾಡದೆ ಸಮ್ಮೊಗರಾಗಿಹರು ಕಂಸಾರಿ ತ್ರಿಗುಣಾತೀಶ ॥ 4॥

ಮೂರು ನಾಮಂಗಳ ಧರಿಸಿದ ದಾಸರು ವೀರ ಮಾರುತಿ ಮತದವರು।
ಸಾರುತ್ತ ಬೊಮ್ಮಾದಿ ಸುರರುಗಳನ್ನು ತಾರತಮ್ಯದಿಂದ ತಿಳಿದು।
ಬಾರಿಬಾರಿಗೆ ನಿಮ್ಮ ಹಾರೈಸಿ ಆನಂದ ವಾರಿಧಿಯಲ್ಲಿ ಮಗ್ನರಾಗಿ।
ತಾರರು ಮನಸಿಗೆ ಮರಡು ದೇವತೆಗಳ ಸಾರ ಹೃದಯರು [illegible]ಹರು ॥ 5॥

ಅಂದು ಬಲೀಂದ್ರನ್ನ ದ್ವಾರದಿ ನೀನಿರೆ ಮಂದಮತಿಯು ರಾವಣನು।
ಬಂದು ಕೆಣಕೆ ನಗುತ ಮಹಾಲೀಲೆ ಯಿಂದಲಿ ನೀನಾ ಖಳನ।
ಒಂದು ಶತಯೋಜನ ತಡಮಾಡದಲೆ ನೀಹಿಂದಕ್ಕೆ ಬೆರಳಲ್ಲಿ ಒಗೆದೆ।
ಇಂದು ನಿನಗೆ ಈ ರಥವ ನಡೆಸುವುದು ಅಂದವಾಗಿಹುದೇನೊ ದೇವ ॥ 6॥

ಬಂಗಾರ ರಥದೊಳು ಶೃಂಗಾರವಾದ ಶ್ರೀ ಮಂಗಳಾಂಗ ಕಲಿಂಗ।
ಭಂಗ ನರಸಿಂಗ ಅಂಗಜ ಜನಕ ಸಾರಂಗ ರಥಾಂಗ ಪಾಣಿ।
ಸಂಗ ನಿಸ್ಸಂಗ ಮಾತಂಗ ವಿಹಂಗ ಪ್ಲವಂಗ ನಾಯಕ ಪರಿಪಾಲ।
ಸಂಗೀತ ಲೋಲ ಗೋಪಾಂಗನೆಯರ ಅಂತ ರಂಗ ಸಂತಾಪ ವಿದೂರ ॥ 7॥

ತಡಮಾಡಲಾಗದೊ ಪೊಡವೀಶ ನೀನಿಂದು ತಡೆಯದಲೆ ಪೊರಟರೆ।
ತಡೆವರಿನ್ನಾರೈಯ ವಡೆಯ ವೇದವೇದ್ಯ ಕಡೆಗಣ್ಣಿನಿಂದ ನೋಡಿದಲೆ।
ನಡೆವುದು ನುಡಿವುದು ಅಡಿಗಡಿಗೆ ನೀನು ಬಿಡದೆ ಒಳಗೆ ಹೊರಗಿದ್ದು
ಸಡಗರ ದೈವವೆ ನುಡಿಯ ಲಾಲಿಸುವುದು ವಡನೊಡನೆ ಪಾಲಿಸುತ್ತ ॥ 8॥

ಹತ್ತವತಾರದ ಹರಿಯೆ ಘನಸಿರಿಯೆ ಮತ್ತೊಬ್ಬರನು ಹೀಗೆ ಕರೆಯೆ।
ಭೃತ್ಯರ ಸಂಗಡೊಡ್ಡಾಡುವ ದೊರೆಯೆ ಎನ್ನಪ್ಪಿಲಿ ಆಡುವ ಮರಿಯೆ।
ಚಿತ್ತದೊಲ್ಲಭ ನಮ್ಮ ವಿಜಯವಿಠ್ಠಲರೇಯ ಎತ್ತನೋಡಲು ನಿನಗೆ ಸರಿಯೆ।
ಅತ್ತಿತ್ತ ಪೋಗದೆ ಇತ್ತ ಬಾರೈಯ ಎನ್ನಪ್ಪಿಲಿ ವೆಂಕಟದೊರೆಯೇ ॥ 9॥